ಓ.ಎಸ್ಃ 364-2008

ಡಿ. ಡಬ್ಲ್ಯೂ ಃ 08

**<u>ಸಾಕ್ಷಿಗೆ ದಿನಾಂಕ 06.12.2021 ರಂದು ಪ್ರಮಾಣ ವಚನ ನೀಡಲಾಯಿತು.</u>**

**<u>ಪಾಟೀಸವಾಲುಃ ವಾದಿ ಪರ ವಕೀಲರಿಂದ</u>**

ನಾನು ನಿಡಿ 39 ರ ಸ್ವತ್ತನ್ನು 2 ನೇ ಪ್ರತಿವಾದಿಯಿಂದ ಖರೀದಿಸಿರುತ್ತೇನೆ. ನಾನು ಕ್ರಯಕ್ಕೆ ಪಡೆದುಕೊಳ್ಳುವಾಗ ವಾದಿಗೆ ಸದರಿ ಸ್ವತ್ತಿನಲ್ಲಿ ಹಕ್ಕು ಇತ್ತೋ ಇಲ್ಲವೋ ನಾನು ತಿಳಿದುಕೊಂಡಿಲ್ಲ. 2 ನೇ ಪ್ರತಿವಾದಿಗೆ ಸದರಿ ಸ್ವತ್ತು ವಿಭಾಗದ ಮೂಲಕ ಸದರಿ ಸ್ವತ್ತು ಬಂದಿರುತ್ತದೆ. ನಾನು ವಿಭಾಗ ಪತ್ರವನ್ನು ನೋಡಿಲ್ಲ. ವಿಭಾಗ ಪತ್ರವು ನನ್ನ ಕ್ರಯದಾರರ ಅಣ್ಣ-ತಮ್ಮಂದಿರ ನಡುವೆ ನಡೆದಿರುತ್ತದೆ. ವಿಭಾಗ ಪತ್ರದ ಮೂಲಕ 2 ನೇ ಪ್ರತಿವಾದಿಗೆ ಯಾವ ಯಾವ ಆಸ್ತಿ ಬಂದಿರುತ್ತದೆ ನನಗೆ ಗೊತ್ತಿಲ್ಲ. ಸಾಕ್ಷಿಯು ನಾನು ಕ್ರಯಕ್ಕೆ ಪಡೆದ ಆಸ್ತಿಯು ಬಂದಿರುತ್ತದೆ ಎಂದು ನುಡಿಯುತ್ತಾರೆ. 2 ನೇ ಪ್ರತಿವಾದಿ ಯಾವ ಉದ್ದೇಶಕ್ಕಾಗಿ ಸದರಿ ಸ್ವತ್ತನ್ನು ನನಗೆ ಮಾರಾಟ ಮಾಡಿರುತ್ತಾರೆ ನನಗೆ ಗೊತ್ತಿಲ್ಲ. ನನಗೆ ವಾದಿ ಮತ್ತು 1 ರಿಂದ 7 ನೇ ಪ್ರತಿವಾದಿಗಳ ಪರಿಚಯವಿದೆ. ದಾವ ಷೆಡ್ಯೂಲ್ ಸ್ವತ್ತಿನಲ್ಲಿ ವಾದಿಗೂ ಸಹಾ ಭಾಗ ಇದೆ ಎಂದರೆ ಸರಿಯಲ್ಲ. ವಾದಿಗೆ ಮೋಸ ಮಾಡುವ ಉದ್ದೇಶದಿಂದ 2 ನೇ ಪ್ರತಿವಾದಿ ಜೊತೆ ಸೇರಿಕೊಂಡು ಸದರಿ ಸ್ವತ್ತನ್ನು ಕ್ರಯಕ್ಕೆ ಪಡೆದುಕೊಂಡಿರುತ್ತೇನೆ ಎಂದರೆ ಸರಿಯಲ್ಲ. 2 ನೇ ಪ್ರತಿವಾದಿ ರವರಿಗೆ ಸ್ವತ್ತನ್ನು ಮಾರಾಟ ಮಾಡುವ ಯಾವುದೇ ಅಧಿಕಾರವಿರಲಿಲ್ಲ ಎಂದರೆ ಸರಿಯಲ್ಲ. ವಾದಿಗೆ ಭಾಗಾಂಶ ನೀಡಬೇಕಾಗುತ್ತದೆ ಎಂಬ ದುರುದ್ದೇಶದಿಂದ ಸುಳ್ಳು ಪ್ರಮಾಣ ಪತ್ರ ಸಲ್ಲಿಸಿ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

ಮರು ವಿಚಾರಣೆ ಇಲ್ಲ.

ನನ್ನ ಉಕ್ತಲೇಖನವನ್ನು ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು.

ಸಾ.ಓ.ಹೇ.ಸ.ಒ

ಅಪರ ಸಿವಿಲ್ ಜಡ್ಜ್ ಮತ್ತು ಜೆಎಂಎಫ್.ಸಿ
ಶ್ರೀರಂಗಪಟ್ಟಣ